# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 351

ಮಾನ್ಯ ಸದಸ್ಯರ ಹೆಸರು : ಶ್ರೀ ಐವನ್ ಡಿ'ಸೋಜಾ
(ವಿಧಾನ ಸಭಾ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 13.08.2025

ಉತ್ತರಿಸುವ ಸಚಿವರು : ಮಾನ್ಯ ಕಂದಾಯ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಕಂದಾಯ ಗ್ರಾಮ ಲೆಕ್ಕಾಧಿಕಾರಿಗಳಿಗೆ ಸ್ವಂತ ಕಚೇರಿ ಒದಗಿಸಲಾಗಿದೆ;<br>(ವಿವರ ನೀಡುವುದು) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು 286 ಗ್ರಾಮ ವೃತ್ತಗಳ ಪೈಕಿ 276 ಗ್ರಾಮ ಆಡಳಿತ ಅಧಿಕಾರಿಗಳಿಗೆ (ಗ್ರಾಮ ವೃತ್ತಗಳು) ಸ್ವಂತ ಕಛೇರಿ ವ್ಯವಸ್ಥೆಯನ್ನು ಮಾಡಲಾಗಿದೆ. |
| ಆ) | ಕಂದಾಯ ಅಧಿಕಾರಿಗಳಿಗೆ ತಮ್ಮ ಕೆಲಸ ನಿರ್ವಹಣೆ ಮಾಡಲು ಲ್ಯಾಪ್ ಟಾಪ್ ಮತ್ತು ಕಂಪ್ಯೂಟರ್ ನೀಡಬೇಕೆಂಬ ಬೇಡಿಕೆ ಪರಿಗಣಿಸಲಾಗಿದೆಯ;<br>(ವಿವರ ನೀಡುವುದು) | ಹೌದು, 2024-25ನೇ ಸಾಲಿನ ಆಯವ್ಯಯದ ಕಂಡಿಕೆ ಸಂಖ್ಯೆ:399 ರಲ್ಲಿ ಘೋಷಿಸಿರುವಂತೆ ಡಿ.ಜಿ. ಕಂದಾಯ ಯೋಜನೆಯಡಿ ಗ್ರಾಮ ಆಡಳಿತ ಅಧಿಕಾರಿಗಳಿಗೆ Laptop ನೀಡಲಾಗಿದೆ. |
| ಇ) | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ 9/11 ದಾಖಲೆ ಪಡೆಯಲು ಅನೇಕ ತೊಂದರೆಗಳಿದ್ದು, ಇದನ್ನು ಸರಿಪಡಿಸಲು ಇಲಾಖೆ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವತಿಯಿಂದ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಇ-ಸ್ವತ್ತು ವಿತರಣೆ ಸುವ್ಯವಸ್ಥೆ ಕುರಿತು ಸರ್ಕಾರವು ಈ ಕೆಳಕಂಡ ಸರಳ ಕ್ರಮಗಳನ್ನು ಕೈಗೊಂಡಿದೆ.<br><br>1. ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು 11ಬಿ ಗಳನ್ನು ವಿತರಿಸುವುದು ಸಕಾಲ ಸೇವೆಯ ಕಾರ್ಯ ವ್ಯಾಪ್ತಿಗೆ ಸೇರ್ಪಟಿದ್ದು, 45 ದಿನಗಳೊಳಗೆ ಅರ್ಜಿದಾರರು ನಿಯಮಗಳ ಪ್ರಕಾರ ಎಲ್ಲಾ ದಾಖಲಾತಿಗಳನ್ನು ಅವರು ಒದಗಿಸಿದ್ದಲ್ಲಿ ನೀಡಬೇಕಾಗಿರುತ್ತದೆ.<br>2. ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು 11ಬಿ ಗಳನ್ನು (ತೆರಿಗೆ ನಿರ್ಧರಣೆ ಪಟ್ಟಿ) ವಿತರಿಸಲು ಗ್ರಾಮ ಪಂಚಾಯಿತಿ ಸಭೆಯ ಅನುಮೋದನೆ ಅಗತ್ಯವಿದ್ದು, ಮೊದಲು ಬಂದ ಅರ್ಜಿಯನ್ನು ಸ್ವೀಕೃತಿ ದಿನಾಂಕದ ಆಧಾರದ ಮೇಲೆ ಮೊದಲು ಇತ್ಯರ್ಥಪಡಿಸಲು (First In First Out-FIFO) ಕ್ರಮ ವಹಿಸುವಂತೆ ಹಾಗೂ ಸಕಾರಣವಿಲ್ಲದೆ ಅರ್ಜಿಗಳನ್ನು ತಿರಸ್ಕರಿಸುವುದು ಮತ್ತು ವಿಲೇ ಇಡದಂತೆ ಗ್ರಾಮ ಪಂಚಾಯಿಗಳಿಗೆ ಸೂಚಿಸಲಾಗಿದೆ.<br>3. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು 11ಬಿ ಗಳನ್ನು ವಿತರಿಸಲು ಅವಶ್ಯಕವಾಗಿರುವ ದಾಖಲೆಗಳ ಚೆಕ್‌ಲಿಸ್ಟಗಳನ್ನು ಗ್ರಾಮ ಪಂಚಾಯಿತಿಗಳ ಸೂಚನಾ ಫಲಕಗಳಲ್ಲಿ ಕಡ್ಡಾಯವಾಗಿ ಅಳವಡಿಸುವ ಬಗ್ಗೆ ಕ್ರಮ ವಹಿಸುವಂತೆ ಗ್ರಾಮ ಪಂಚಾಯಿತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ತಿಳಿಸಿದೆ. |

| | | | |
|---|---|---|---|
| | | | 4. ತಂತ್ರಾಂಶದ ಬಳಕೆ ಬಗ್ಗೆ ಗ್ರಾಮ ಪಂಚಾಯಿತಿಗಳ ಅಧಿಕಾರಿ/ ಸಿಬ್ಬಂದಿಗಳಿಗೆ ತರಬೇತಿ ನೀಡಲಾಗಿದೆ.<br>5. ಸರ್ಕಾರದ ಆದೇಶ ಸಂಖ್ಯೆ: RDPR 370 GPA 2025, ದಿನಾಂಕ: 17-05-2025 ರಲ್ಲಿ 2025-26ನೇ ಸಾಲಿನ ಆಯವ್ಯ ಭಾಷಣದ ಕಂಡಿಕೆ 272(i) ರಂತೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಅಗತ್ಯ ದಾಖಲೆಗಳನ್ನು ಹೊಂದಿರುವ ಕ್ರಮಬದ್ಧ ಆಸ್ತಿಗಳಿಗೆ ನಿಗದಿತ ನಮೂನೆ 9 ಮತ್ತು 11 ಎ ಮತ್ತು ಕ್ರಮ ಬದ್ಧವಲ್ಲದ ಆಸ್ತಿಗಳಿಗೆ ನಿಗದಿತ ನಮೂನೆ-11ಬಿ ಗಳನ್ನು ಇ-ಸ್ವತ್ತು ತಂತ್ರಾಂಶದ ಮೂಲಕ ವಿತರಿಸಲು 'ಇ-ಸ್ವತ್ತು ಅಭಿಯಾನ' ವನ್ನು ಹಮ್ಮಿಕೊಳ್ಳಲು ಸರ್ಕಾರವು ಆಡಳಿತಾತ್ಮಕ ಅನುಮೋದನೆ ನೀಡಿದೆ. |

ಸಂಖ್ಯೆ: ಕಂಇ 149 ಬಿಎಸ್‌ಸಿ 2025

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು